# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1924

ಸದಸ್ಯರ ಹೆಸರು : ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 24/03/2026

ಉತ್ತರಿಸುವ ಸಚಿವರು : ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಗಳೂರು ಮಹಾನಗರ ಪಾಲಿಕೆಯ ಐದು ವರ್ಷದ ಅಧಿಕಾರಾವಧಿ ಈಗಾಗಲೇ ಮುಕ್ತಾಯಗೊಂಡು, ಸಾಕಷ್ಟು ಸಮಯ ಕಳೆದಿದ್ದರೂ ಸಹ ಚುನಾವಣೆ ನಡೆಯದಿರುವುದರಿಂದ, ಪ್ರತೀ ವರ್ಷ ಕೇಂದ್ರ ಸರ್ಕಾರದಿಂದ ಬರುತ್ತಿದ್ದ ಕೋಟ್ಯಾಂತರ ರೂ. ಅನುದಾನವನ್ನು ಕಳೆದುಕೊಳ್ಳುವುದರ ಜೊತೆಗೆ ಸಂವಿಧಾನದ ಮೂಲ ಆಶಯಕ್ಕೆ ಧಕ್ಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅವಧಿ ಮುಕ್ತಾಯಗೊಂಡಿರುವ ಮಹಾನಗರ ಪಾಲಿಕೆಗಳಲ್ಲಿ ಮುಂದಿನ ಚುನಾವಣೆ ಕ್ರಮಗಳಿಗೆ ಅನುಕೂಲವಾಗುವಂತೆ ನಿಗದಿತ ಮೀಸಲಾತಿಯನ್ವಯ ಚುನಾವಣೆಗಳನ್ನು ನಡೆಸುವುದಕ್ಕಾಗಿ ಹೊಸದಾಗಿ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ಅನುದಾನದ ಸಮಸ್ಯೆ ಉಂಟಾಗದಂತೆ ದಿನನಿತ್ಯದ ಕಾರ್ಯನಿರ್ವಹಣೆ ಮಾಡಲು ಹಾಗೂ ಆಡಳಿತ ಹಿತದೃಷ್ಟಿಯಿಂದ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿರುತ್ತದೆ ಮತ್ತು ಈ ಮೂಲಕ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಡಳಿತ-ಅಭಿವೃದ್ಧಿ ಕಾರ್ಯಗಳು ಕುಂಠಿತವಾಗದಂತೆ ಕ್ರಮವಹಿಸಲಾಗಿರುತ್ತದೆ. |
| ಆ | ಬಂದಿದ್ದಲ್ಲಿ, ಐದು ವರ್ಷದ ಅಧಿಕಾರಾವಾಧಿ ಈಗಾಗಲೇ ಪೂರ್ಣಗೊಳಿಸಿರುವ ಮಂಗಳೂರು ಮಹಾನಗರ ಪಾಲಿಕೆಗೆ ನಿಗದಿತ ಅವಧಿಯೊಳಗೆ ಚುನಾವಣೆ ನಡೆಸದಿರಲು ಕಾರಣಗಳೇನು: | ಮಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಆಡಳಿತ ಮಂಡಳಿಯ ಆಡಳಿತಾವಧಿ ಮುಕ್ತಾಯಗೊಂಡಿರುವ ಕಾರಣ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 34 ಎಂಎಲ್ಆರ್ 2025; ದಿನಾಂಕ:20/03/2025 ರನ್ವಯ ಸುಗಮ ಆಡಳಿತ ನಿರ್ವಹಣೆಗಾಗಿ ಚುನಾಯಿತ ಆಡಳಿತ ಮಂಡಳಿಯ ಆಡಳಿತಾವಧಿ ಮುಕ್ತಾಯಗೊಂಡ ಮರುದಿನದಿಂದಲೇ ಅನ್ವಯವಾಗುವಂತೆ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ರವರನ್ನು ಆಡಳಿತಾಧಿಕಾರಿಯನ್ನು ನೇಮಕ ಮಾಡಲಾಗಿರುತ್ತದೆ. ಮಹಾನಗರ ಪಾಲಿಕೆಗಳಲ್ಲಿನ ವಾರ್ಡುಗಳಿಗೆ ಸರ್ಕಾರದ ಆದೇಶ ಸಂಖ್ಯೆ:ನಅಇ 240 ಎಂಎಲ್ಆರ್ 2013; ದಿನಾಂಕ:02/02/2015 ರನ್ವಯ ನಿಗದಿಪಡಿಸಿರುವ ಮೀಸಲಾತಿ ಮಾರ್ಗಸೂಚಿಯನ್ನು ಅನುಸರಿಸುತ್ತಿದ್ದು, ಪ್ರಸ್ತುತ ಮಂಗಳೂರು ಮಹಾನಗರ ಪಾಲಿಕೆಯಲ್ಲಿನ ವಾರ್ಡುವಾರು ಚುನಾವಣೆಗಳಿಗಾಗಿ ಸರ್ಕಾರದಿಂದ ವಾರ್ಡುವಾರು ಮೀಸಲಾತಿಯನ್ನು ನಿಗದಿಪಡಿಸುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. |
| ಇ | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಗಳೂರು ಮಹಾನಗರ ಪಾಲಿಕೆಯ ಐದು ವರ್ಷದ ಅಧಿಕಾರಾವಧಿ ಮುಕ್ತಾಯಗೊಂಡಿದ್ದು ಯಾವಾಗ ಮತ್ತು ಆ ಸಂಸ್ಥೆಗೆ ಯಾವ ದಿನಾಂಕದಿಂದ ಆಡಳಿತಾಧಿಕಾರಿಯನ್ನು ನೇಮಕ ಮಾಡಲಾಗಿದೆ; | |
| ಈ | ನಿಗದಿತ ಅವಧಿಯೊಳಗೆ ಚುನಾವಣೆ ನಡೆಸದೇ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿರುವ ಕಾರಣದಿಂದಾಗಿ ಜನಪ್ರತಿನಿಧಿಗಳೇ ಇಲ್ಲದೇ ಆಡಳಿತಾಧಿಕಾರಿಗಳ ದರ್ಬಾರ್‌ಗೆ ಒಳಗಾಗಿರುವ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಮಹಾನಗರ ಪಾಲಿಕೆಯ ಚುನಾವಣೆಯನ್ನು ಈ ಕೂಡಲೇ ನಡೆಸಲು ಸರ್ಕಾರ ಅಗತ್ಯ ಕ್ರಮವಹಿಸುವುದೇ? | |

ಸಂಖ್ಯೆ:ನಅಇ 31 ಎಲ್‌ಸಿಕ್ಯೂ 2026

(ಬಿ ಎಸ್ ಸುರೇಶ)

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು